**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆರಹಿತ ಪ್ರಶ್ನೆ ಸಂಖ್ಯೆ : **85**
ಸದಸ್ಯರ ಹೆಸರು : ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 02.03.2020
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು ಮೈಸೂರು ವಿಭಾಗಗಳಲ್ಲಿ ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಮುಂಬಡ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ. | ಈ ವಿಭಾಗಗಳಲ್ಲಿ ಇದುವರೆವಿಗೂ ಮುಂಬಡ್ತಿ ನೀಡದೆ ಇರಲು ಕಾರಣಗಳೇನು; | ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಬಾಕಿಯಿದ್ದ ಶ್ರೀ ಬಿ.ಕೆ ಪವಿತ್ರ ಪ್ರಕರಣದಿಂದಾಗಿ ಕಳೆದ ಕೆಲವು ವರ್ಷಗಳಿಂದ ಮುಂಬಡ್ತಿ ನೀಡಲು ಸಾಧ್ಯವಾಗಿರುವುದಿಲ್ಲ. ಅಂತಿಮ ಆದೇಶ ಬಂದಿರುವ ಹಿನ್ನೆಲೆಯಲ್ಲಿ ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ.<br><br>ಬೆಂಗಳೂರು, ಮೈಸೂರು ವಿಭಾಗಗಳಲ್ಲಿ ಹಾಲಿ ಚಾಲ್ತಿಯಲ್ಲಿದ್ದ ಪ್ರೌಢ ಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಎಲ್‌ಬಿಪಿ 2014, ದಿನಾಂಕ:20/05/2014ರಲ್ಲಿ ನೀಡಿರುವ ನಿರ್ದೇಶನಗಳಂತೆ, ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಹಾಗೂ ರೋಸ್ಟರ್ ಮೆರಿಟ್ ಆಧಾರದ ಮೇಲೆ, ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ಅಂತಿಮಗೊಳಿಸಬೇಕಾಯಿತು. ಈ ಕಾರಣದಿಂದ ಮುಂಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ. |
| ಇ | ಈ ಸಂಬಂಧ ಇದುವರೆವಿಗೂ ಕೈಗೊಂಡ ಕ್ರಮಗಳೇನು; | ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ದಿನಾಂಕ:06/02/2020ರಂದು ಪ್ರಕಟಿಸಲಾಗಿದೆ. ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ, ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ, ಮುಖ್ಯ ಶಿಕ್ಷಕರ ವೃಂದಕ್ಕೆ, ಅರ್ಹರಾಗುವ ಶಿಕ್ಷಕರುಗಳ ತಾತ್ಕಲಿಕ ಆಧ್ಯತಾ ಪಟ್ಟಿಯನ್ನು ದಿನಾಂಕ:07/02/2020ರಂದು ಪ್ರಕಟಿಸಿದೆ. ಬಡ್ತಿ ನೀಡುವ ಸಂಬಂಧ ಕಾರ್ಯ ನಿರ್ವಹಣಾ ವರದಿ ಹಾಗೂ ಪೂರಕ ದಾಖಲೆಗಳನ್ನು ಪಡೆಯಲಾಗಿದ್ದು, ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುವ ಪ್ರಕ್ರಿಯೆ ಚಾಲನೆಯಲ್ಲಿದೆ. |
| ಈ | ಯಾವ ಕಾಲಮಿತಿಯಲ್ಲಿ ಮುಂಬಡ್ತಿ ನೀಡಲಾಗುವುದು? | |

ಸಂಖ್ಯೆ: ಇಡಿ 19 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು